# Akashvani : Bangalore
# Regional Bulletin In Kannada
# 07.09.2024 / 14.30 hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**07.09.2024** **14.30 hrs**

**<><*<><>*><>**

<u>ಮುಖ್ಯಾಂಶಗಳು</u>

**<><*<><>*><>**

**೧. ಮಹದಾಯಿ ವಿವಾದ ಶೀಘ್ರವೇ ಬಗೆಹರಿಸುವಂತೆ ಕೇಂದ್ರ ಸರ್ಕಾರಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ**

**೨. ಹತ್ತು ವರ್ಷಗಳ ಬಳಿಕ ಕಲಬುರಗಿಯಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆಸಲು ಸರ್ಕಾರ ನಿರ್ಧಾರ**

**೩. ಮಂಡ್ಯ ಜಿಲ್ಲೆಯ ಆದಿಚುಂಚನಗಿರಿಯಲ್ಲಿ ತಾರಾಲಯ ನಿರ್ಮಿಸುವ ಭರವಸೆ ನೀಡಿದ ಸಚಿವ ಬೋಸರಾಜು**

**೪. ರಾಜ್ಯದೆಲ್ಲೆಡೆ ಗಣೇಶ ಹಬ್ಬದ ಸಂಭ್ರಮ; ಗಣ್ಯರಿಂದ ಜನತೆಗೆ ಶುಭಾಶಯ**

**೫. ಇಂದು ಅಂತಾರಾಷ್ಟ್ರೀಯ ರಣಹದ್ದು ಜಾಗೃತಿ ದಿನ; ರಾಜ್ಯದಲ್ಲಿ ರಣಹದ್ದುಗಳ ಸಂಖ್ಯೆ ಗಣನೀಯ ಏರಿಕೆ**

**<><*<><>*><>**

ಮಹದಾಯಿ ವಿವಾದ ಶೀಘ್ರವೇ ಬಗೆಹರಿಸುವಂತೆ ಕೇಂದ್ರ ಸರ್ಕಾರಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹದಾಯಿ ವಿವಾದ ಕುರಿತಂತೆ ಇನ್ನು ೧೫ ದಿನದೊಳಗೆ ಸರ್ವಪಕ್ಷ ಸಭೆ ಕರೆಯಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಶೀಘ್ರವೇ ಎತ್ತಿನಹೊಳೆ ಯೋಜನೆಯಲ್ಲಿ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜನರ ನೀರಿನ ಬರ ನೀಗಿಸಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಹತ್ತು ವರ್ಷಗಳ ಬಳಿಕ ಕಲಬುರಗಿ ಜಿಲ್ಲೆಯಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆಸಲು ಸರ್ಕಾರ ನಿರ್ಧರಿಸಿದೆ. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಕುರಿತಂತೆ ಚರ್ಚೆ ನಡೆಸಿ, ನಿರ್ಣಯ ತೆಗೆದುಕೊಳ್ಳಲು ಸೆಪ್ಟೆಂಬರ್ ೧೭ಕ್ಕೆ ಸಂಪುಟ ಸಭೆ ನಡೆಯಲಿದೆ. ಜಿಲ್ಲೆಯ ಮಿನಿ ವಿಧಾನಸೌಧದಲ್ಲಿರುವ ಪ್ರಾದೇಶಿಕ ಆಯುಕ್ತರ ಕಾರ್ಯಾಲಯದ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆಯುವ ಸಂಪುಟ ಸಭೆಯಲ್ಲಿ ಕಲ್ಯಾಣ ಕರ್ನಾಟಕದ ಬಗ್ಗೆ ವಿಶೇಷ ಆದ್ಯತೆ ನೀಡಲು ನಿರ್ಧರಿಸಲಾಗಿದೆ. ಈ ಹಿಂದೆ ೨೦೧೪ರ ನವೆಂಬರ್ ೨೮ರಂದು ಸಿದ್ದರಾಮಯ್ಯ ನೇತೃತ್ವದಲ್ಲಿ ಕಲಬುರಗಿಯಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆದಿತ್ತು.

**<><*<><>*><>**

ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಆದಿಚುಂಚನಗಿರಿ ಕ್ಷೇತ್ರದಲ್ಲಿ ನಿರ್ಮಿಸಲಾಗುತ್ತಿರುವ ಉಪಪ್ರಾದೇಶಿಕ ವಿಜ್ಞಾನ ಕೇಂದ್ರದ ಕಾಮಗಾರಿ ಪೂರ್ಣಗೊಳಿಸುವ ಹಾಗೂ ತಾರಾಲಯ ನಿರ್ಮಾಣಕ್ಕೆ ಸರಕಾರದ ವತಿಯಿಂದ

ಅಗತ್ಯ ಸಹಕಾರ ನೀಡುವುದಾಗಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಭೋಸರಾಜು ಭರವಸೆ ನೀಡಿದ್ದಾರೆ. ಆದಿಚುಂಚನಗಿರಿ ಕ್ಷೇತ್ರಕ್ಕೆ ಭೇಟಿ ನೀಡಿ ಉಪಪ್ರಾದೇಶಿಕ ವಿಜ್ಞಾನ ಕೇಂದ್ರದ ಕಾಮಗಾರಿ ವೀಕ್ಷಿಸಿದ ಸಚಿವರು, ತಾರಾಲಯ ನಿರ್ಮಾಣದ ಬಗ್ಗೆಯೂ ಅಗತ್ಯ ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

ಬೆಂಗಳೂರಿನ ವಾಯುಪಡೆ ತಾಂತ್ರಿಕ ಕಾಲೇಜಿನಲ್ಲಿಂದು ಏರೋನಾಟಿಕಲ್ ಇಂಜಿನಿಯರಿಂಗ್ ಪ್ರಶಿಕ್ಷಣಾರ್ಥಿಗಳಿಂದ ನಿರ್ಗಮನ ಪಥ ಸಂಚಲನ ನಡೆಯಿತು. ಏರ್ ಮಾರ್ಷಲ್ ಸಿ.ಆರ್. ಮೋಹನ್ ಗೌರವ ವಂದನೆ ಸ್ವೀಕರಿಸಿದರು. ೬೨ ವಾರಗಳ ತರಬೇತಿಯನ್ನು ಯಶಸ್ವಿಯಾಗಿ ಪೂರೈಸಿದ ೧೦೩ ಏರೋನಾಟಿಕಲ್ ಇಂಜಿನಿಯರಿಂಗ್ ಪ್ರಶಿಕ್ಷಣಾರ್ಥಿಗಳಿಗೆ ಪದವಿ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು. ೬೦ಕ್ಕೂ ಹೆಚ್ಚು ಇಂಜಿನಿಯರಿಂಗ್ ಅಧಿಕಾರಿಗಳಲ್ಲಿ ೧೫ ಮಹಿಳಾ ಅಧಿಕಾರಿಗಳು ಮತ್ತು ೧೦ ವಿದೇಶಿ ಅಧಿಕಾರಿಗಳು ಪದವಿ ಪಡೆದಿದ್ದಾರೆ.

<><*<><>*><>

ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡಿರುವ ಗ್ರಾಹಕರು ವಿದ್ಯುತ್ ಸಂಪರ್ಕದ ಕಡಿತದಿಂದ ತೊಂದರೆಗೊಳಗಾಗದಂತೆ ನಾಳೆ ಮತ್ತು ಇದೇ ೧೫ರ ಭಾನುವಾರವೂ ಬೆಸ್ಕಾಂ ಉಪ ವಿಭಾಗಗಳ ಕ್ಯಾಶ್ ಕೌಂಟರ್‌ಗಳು ತೆರೆದಿರಲಿವೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ. ಬಿಲ್ ಬಾಕಿ ಉಳಿಸಿಕೊಂಡಿರುವ ಗ್ರಾಹಕರು ವಿದ್ಯುತ್ ಸಂಪರ್ಕ ಕಡಿತದಿಂದ ತೊಂದರೆಗೆ ಒಳಗಾಗಬಾರದು ಹಾಗೂ ಆನ್‌ಲೈನ್ ಪೇಮೆಂಟ್ ಬಳಸದವರ ಅನಕೂಲಕ್ಕಾಗಿ ಈ ವಿಶೇಷ ವ್ಯವಸ್ಥೆ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಬಿಲ್ ಬಂದ ೩೦ ದಿನದೊಳಗೆ ವಿದ್ಯುತ್ ಶುಲ್ಕ ಪಾವತಿಸದಿದ್ದಲ್ಲಿ ಮತ್ತು ಹೆಚ್ಚುವರಿ ಭದ್ರತಾ ಠೇವಣಿ ಮೊತ್ತ ಪಾವತಿಸದಿದ್ದಲ್ಲಿ ಕೆಇಆರ್‌ಸಿ ನಿಯಮಾವಳಿ ಅನ್ವಯ ಗ್ರಾಹಕರ ವಿದ್ಯುತ್ ಸಂಪರ್ಕ ಕಡಿತಗೊಳಿಸಲು ನಿರ್ಧರಿಸಿದ್ದು, ಸೆಪ್ಟೆಂಬರ್ ೧ರಿಂದಲೇ ಈ ನಿಯಮ ಜಾರಿಯಾಗಿದೆ ಎಂದು ಹೇಳಿದೆ. ವಿದ್ಯುತ್ ಬಿಲ್ ಬಾಕಿ ಮೊತ್ತ ಮತ್ತು ಹೆಚ್ಚುವರಿ ಭದ್ರತಾ ಠೇವಣಿ ಮೊತ್ತ ೧೦೦ ರೂಪಾಯಿ ಗಳಿಗಿಂತ ಅಧಿಕವಾಗಿದ್ದಲ್ಲಿ, ಅಂತಹ ಸ್ಥಾಪನಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗುತ್ತದೆ. ಗೃಹ ಜ್ಯೋತಿಯೋಜನೆ ಅಡಿ ಶೂನ್ಯ ಬಿಲ್ ಪಡೆಯುತ್ತಿರುವ ಗ್ರಾಹಕರ ಹಿಂಬಾಕಿ ಶೂನ್ಯವಿದ್ದಲ್ಲಿ ಈ ಬಗ್ಗೆ ಚಿಂತಿಸಬೇಕಿಲ್ಲ ಎಂದು ಪ್ರಕಟಣೆ ಸ್ಪಷ್ಟಪಡಿಸಿದೆ.

<><*<><>*><>

ರಾಜ್ಯದಲ್ಲಿಯೇ ಅತಿ ಹೆಚ್ಚು ವಿವಿಧ ರೀತಿಯ ಹೂ ಬೆಳೆಯುವ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹೂ ಬೆಳೆಗಾರರಿಗೆ ರಾಜ್ಯ ಸರ್ಕಾರ ಹಬ್ಬದ ಸಂಭ್ರಮದಲ್ಲಿ ಸಿಹಿ ಸುದ್ದಿ ನೀಡಿದೆ. ಚಿಕ್ಕಬಳ್ಳಾಪುರ ತಾಲೂಕು ನಂದಿ ಹೋಬಳಿ ಯಲುವಳ್ಳಿ ಬಳಿಯಿರುವ ತೋಟಗಾರಿಕೆ ಇಲಾಖೆಗೆ ಸೇರಿದ ೨೦ ಎಕರೆ ಭೂಮಿಯನ್ನು ಜಿಲ್ಲಾ ಕೇಂದ್ರದಲ್ಲಿ ಬೃಹತ್ ಹೂವಿನ ಮಾರುಕಟ್ಟೆ ನಿರ್ಮಿಸಲು ಮಂಜೂರು ಮಾಡಿ ಗೌರಿಗಣೇಶ ಹಬ್ಬದ ಪ್ರಯುಕ್ತ ಕೊಡುಗೆಯಾಗಿ ನೀಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಹೂ, ಹಣ್ಣು ಮತ್ತು ತರಕಾರಿಗಳ ಜೊತೆಗೆ ಹೈನುಗಾರಿಕೆಯಲ್ಲೂ ಚಿಕ್ಕಬಳ್ಳಾಪುರ ಹೆಸರು ಮಾಡಿದೆ. ಜಿಲ್ಲೆಯಲ್ಲಿ ಬೆಳೆಯುವ ಸೇವಂತಿಗೆ, ಗುಲಾಬಿ, ಚೆಂಡುಹೂ ಮತ್ತು ವಿವಿಧ ಹಬ್ಬ, ಕಾರ್ಯಕ್ರಮಗಳಿಗೆ ಬೇಕಾದ ಬಣ್ಣಬಣ್ಣದ ಅಲಂಕಾರಿಕ ಹೂವುಗಳಿಗೆ ಹೊರ ರಾಜ್ಯ ಮತ್ತು

ಹೊರದೇಶಗಳಲ್ಲಿಯೂ ಹೆಚ್ಚಿನ ಬೇಡಿಕೆ ಇದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಪುಷ್ಪೋದ್ಯಮಕ್ಕೆ ಮತ್ತಷ್ಟು ಬಲ ತುಂಬಿ ಉತ್ತೇಜಿಸುವ ದೃಷ್ಟಿಯಿಂದ ರಾಜ್ಯ ಸರ್ಕಾರ ಚಿಕ್ಕಬಳ್ಳಾಪುರದಲ್ಲಿ ಬೃಹತ್ ಹೂವಿನ ಮಾರುಕಟ್ಟೆ ನಿರ್ಮಿಸಲು ಉದ್ದೇಶಿಸಿ, ಚಿಕ್ಕಬಳ್ಳಾಪುರ ಎಪಿಎಂಸಿ ಕಾರ್ಯದರ್ಶಿ ಹೆಸರಿಗೆ ಜಮೀನನ್ನು ಮಂಜೂರು ಮಾಡಿದೆ.

<><*<><>*><>

ನಾಡಿನೆಲ್ಲೆಡೆ ಇಂದು ಗಣೇಶ ಹಬ್ಬದ ಸಂಭ್ರಮ ಮನೆಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನಾಡಿನ ಜನತೆಗೆ ಗಣೇಶ ಹಬ್ಬದ ಶುಭಾಶಯ ಕೋರಿದ್ದಾರೆ. ಸಂಕಷ್ಟಹರ ಗಣೇಶನು ಬದುಕಲ್ಲಿ ಎದುರಾಗುವ ಸಕಲ ವಿಘ್ನಗಳನ್ನು ಎದುರಿಸುವ ಆತ್ಮಬಲವನ್ನು ನಿಮ್ಮೆಲ್ಲರಲ್ಲೂ ತುಂಬಲಿ ಎಂದು ಹಾರೈಸುತ್ತೇನೆ. ಹಬ್ಬವನ್ನು ಸಡಗರ - ಸಂಭ್ರಮದಿಂದ ಆಚರಿಸೋಣ, ಇದರ ಜೊತೆಗೆ ಪರಿಸರ ಕಾಳಜಿಯನ್ನು ಮರೆಯದಿರೋಣ ಎಂದು ತಿಳಿಸಿದ್ದಾರೆ. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು, ರಾಜ್ಯದ ಜನತೆಗೆ ಶುಭ ಹಾರೈಸಿದ್ದು, ಪರಿಸರಸ್ನೇಹಿ ಗಣೇಶ ಮೂರ್ತಿಗಳಿಗೆ ಪೂಜೆ ಸಲ್ಲಿಸುವಂತೆ ಕರೆ ನೀಡಿದ್ದಾರೆ. ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಎಲ್ಲರಿಗೂ ಗಣೇಶ ಚತುರ್ಥಿಯ ಶುಭಾಶಯ ತಿಳಿಸಿದ್ದಾರೆ. ಹುಬ್ಬಳ್ಳಿಯ ಈದ್ಗಾ ಮೈದಾನದಲ್ಲಿ ಗಣಪತಿ ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದ್ದು, ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಶಿವಮೊಗ್ಗ ನಗರದಲ್ಲಿಯೂ ಪೊಲೀಸ್ ಇಲಾಖೆ ಭದ್ರತೆ ಹೆಚ್ಚಿಸಿದೆ. ರಾಜಧಾನಿ ಬೆಂಗಳೂರಿನಲ್ಲಿ ಗಣೇಶ ಹಬ್ಬದ ಸಂಭ್ರಮ ಕಳೆಗಟ್ಟಿದೆ. ಮನೆ ಮನೆಗಳಲ್ಲಿ ಪ್ರತಿಷ್ಠಾಪನೆ ಮಾಡಿರುವ ಗಣೇಶನ ಮೂರ್ತಿಗಳನ್ನು ಜಲ ಮೂಲಗಳಲ್ಲಿ ವಿಸರ್ಜಿಸಲು ಬೆಂಗಳೂರು ಮಹಾ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಗಣೇಶೋತ್ಸವ ಸಂಭ್ರಮ ಮನೆ ಮಾಡಿದೆ. ಮನೆಗಳ ಮುಂಭಾಗದಲ್ಲಿ ಮಾವಿನ ತೋರಣ ಬಾಳೆಕಂದುಗಳಿಂದ ಸಿಂಗರಿಸಿ ಗಣೇಶನನ್ನು ಬರಮಾಡಿಕೊಳ್ಳಲಾಯಿತು. ಕೋಲಾರ ಜಿಲ್ಲೆಯಾದ್ಯಂತ ಇಂದು ಗಣೇಶ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸುತ್ತಿದ್ದು, ಎಲ್ಲೆಡೆ ಸಂಭ್ರಮ ಮನೆ ಮಾಡಿದೆ. ನಾಡಿನ ಜನತೆ ತಮ್ಮ ಒಳಿತಿಗಾಗಿ, ಜ್ಞಾನ ಸಮೃದ್ಧಿಗಾಗಿ ಗಣೇಶನ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಿ ಶ್ರದ್ಧಾ ಭಕ್ತಿಯಿಂದ ಗಣೇಶ ಹಬ್ಬವನ್ನು ಆಚರಣೆ ಮಾಡುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಶ್ರದ್ಧಾಭಕ್ತಿಯಿಂದ ವಿನಾಯಕ ಚತುರ್ಥಿ ಆಚರಿಸಲಾಗುತ್ತಿದೆ. ದೊಡ್ಡಬಳ್ಳಾಪುರದಲ್ಲಿ ನೇಕಾರ ಸಮುದಾಯ ಸಗಣಿಯಲ್ಲಿ ಪಿಳ್ಳೆರಾಯನನ್ನು ಪ್ರತಿಷ್ಠಾಪಿಸಿ, ಮಗ್ಗಗಳಿಗೆ ಪೂಜೆ ಸಲ್ಲಿಸುವ ಆಚರಣೆ ವಿಶೇಷವಾಗಿದೆ. ಹಾವೇರಿಯಲ್ಲಿ ಗಣೇಶ ಮೂರ್ತಿ ವಿಸರ್ಜನೆಗೆ ಅನುಕೂಲವಾಗಲೆಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ 'ಗಣೇಶ ಮೂರ್ತಿ ವಿಸರ್ಜನಾ ಸಂಚಾರಿ ವಾಹನ' ವ್ಯವಸ್ಥೆ ಮಾಡಲಾಗಿದೆ ಎಂದು ಪರಿಸರ ಅಧಿಕಾರಿ ರಾಜಶೇಖರ ಪುರಾಣಿಕ್ ತಿಳಿಸಿದ್ದಾರೆ. ಗಣೇಶ ಚತುರ್ಥಿಯನ್ನು ವಿಜಯಪುರ ಜಿಲ್ಲೆಯಾದ್ಯಂತ ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ ಬಳ್ಳಾರಿಯಲ್ಲೂ ಗಣೇಶ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸುತ್ತಿದ್ದಾರೆ. ನಗರದ ೪೫೦ ಕ್ಕೂ ಹೆಚ್ಚು ಸ್ಥಳಗಳಲ್ಲಿ ಗಣೇಶನ ವಿಗ್ರಹ ಪ್ರತಿಷ್ಠಾಪಿಸಿದ್ದು, ಐದು ದಿನಗಳ ಬಳಿಕ ವಿಸರ್ಜನಾ ಕಾರ್ಯಕ್ರಮ ನಡೆಯಲಿದೆ.

<><*<><>*><>

ಪುರಾಣ ಪ್ರಸಿದ್ಧ ಕೂಟಾದ್ರಿ ಕ್ಷೇತ್ರವೆಂದೇ ಖ್ಯಾತಿ ಪಡೆದಿರುವ ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಕುರುಡುಮಲೆ ಗ್ರಾಮದಲ್ಲಿ ನಾಳೆ ಗಣಪತಿ ಬ್ರಹ್ಮರಥೋತ್ಸವ ನಡೆಯಲಿದೆ. ರಾಜ್ಯದ ಮೂಲೆ ಮೂಲೆಗಳಿಂದ

ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಈ  ರಥೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಇಂದಿನಿಂದ ಸೆಪ್ಟೆಂಬರ್ ೧೧ರ ವರೆಗೂ ವಿವಿಧ ಕಾರ್ಯಕ್ರಮಗಳು ನಡೆಯಲಿದ್ದು, ನಾಳೆ ಮಧ್ಯಾಹ್ನ ೧.೩೦ ರಿಂದ ೧.೪೦ ರೊಳಗೆ ಬ್ರಹ್ಮರಥೋತ್ಸವ ನಡೆಯಲಿದೆ.

**<><*<><>*><>**

ಪರಿಸರಕ್ಕೆ ಪೂರಕವಾದ ಗಣೇಶ ಮೂರ್ತಿಗಳನ್ನು ತಯಾರಿಸುವ ಉದ್ದೇಶದಿಂದ ಬೆಳಗಾವಿಯ ಆನಂದ್ ಸಿದ್ದಪ್ಪ ಅವರು ಎರಡು ಲಕ್ಷ ೨೧ ಸಾವಿರದ ೧೧೧ ಹುಣಸೆಬೀಜಗಳನ್ನು ಬಳಸಿ, ರೂಪಿಸಿರುವ ಬೃಹತ್ ಪರಿಸರ ಸ್ನೇಹಿ ಗಣೇಶಮೂರ್ತಿ ಸಾರ್ವಜನಿಕರ ಗಮನ ಸೆಳೆಯುತ್ತಿದೆ.  ಕಳೆದ ವರ್ಷ ರುದ್ರಾಕ್ಷಿಗಳಿಂದ ಗಣೇಶ ಮೂರ್ತಿ ಮಾಡಿದ್ದ ಅವರು, ಈ ಬಾರಿ ಮತ್ತೊಂದು ವಿನೂತನ ಹೆಜ್ಜೆ ಇಟ್ಟಿದ್ದಾರೆ. ಮರುಬಳಕೆಯ ದಿನಪತ್ರಿಕೆಗಳು ಮತ್ತು ಕಾರ್ಡ್ಬೋರ್ಡ್, ಹುಲ್ಲು ಹಾಗೂ ಹುಣಸೆ ಬೀಜಗಳನ್ನು ಉಪಯೋಗಿಸಿ ೮ ಅಡಿ ಎತ್ತರದ ಸುಂದರ ಗಣೇಶ ಮೂರ್ತಿ ನಿರ್ಮಿಸಿದ್ದಾರೆ. ಇದಕ್ಕಾಗಿ ೨ ಲಕ್ಷ ೨೧ ಸಾವಿರ ಹುಣಸೆ ಬೀಜ ಬಳಸಿದ್ದಾರೆ.   ೮ ಅಡಿ ಉದ್ದ ಹಾಗೂ ೪ ಅಡಿ ಅಗಲದ ಗಣೇಶ ಮೂರ್ತಿ ಇದಾಗಿದ್ದು, ವಿಸರ್ಜನೆ ನಂತರ ಹುಣಸೆ ಬೀಜದಿಂದ ಸಸಿಗಳು ಬೆಳೆಯಲಿ ಎಂಬ ಪರಿಕಲ್ಪನೆಯೊಂದಿಗೆ ಈ ಮೂರ್ತಿ ತಯಾರಿಸಲಾಗಿದೆ

**<><*<><>*><>**

ಇಂದು ಅಂತಾರಾಷ್ಟ್ರೀಯ ರಣಹದ್ದು ಜಾಗೃತಿ ದಿನ. ಈ ದಿನವನ್ನು ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳ ಮೊದಲ ಶನಿವಾರ ಜಗತ್ತಿನಾದ್ಯಂತ ಆಚರಿಸಲಾಗುತ್ತದೆ. ನಮ್ಮ ಪರಿಸರ ವ್ಯವಸ್ಥೆಯಲ್ಲಿ ರಣಹದ್ದುಗಳ ಪ್ರಾಮುಖ್ಯತೆ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ. ರಣಹದ್ದುಗಳನ್ನು ಕ್ರೂರ, ಕೊಳಕು ಪಕ್ಷಿಗಳೆಂದು ಕೆಟ್ಟದಾಗಿ ಬಿಂಬಿಸಲಾಗುತ್ತಿದೆ. ಆದರೆ, ವಾಸ್ತವವಾಗಿ ಈ ಪಕ್ಷಿಗಳು ನೈಸರ್ಗಿಕ ಪ್ರಪಂಚದ ಅಪ್ರತಿಮ ನಾಯಕರುಗಳಾಗಿವೆ. ಅಂತಾರಾಷ್ಟ್ರೀಯ ರಣಹದ್ದು ಜಾಗೃತಿ ದಿನದ ಆಚರಣೆ ದಕ್ಷಿಣ ಆಫ್ರಿಕಾ ಮತ್ತು ಇಂಗ್ಲೆಂಡ್‌ನಲ್ಲಿ ಮೊದಲು ಪ್ರಾರಂಭವಾಯಿತು. ರಣಹದ್ದುಗಳು ಉಚಿತವಾಗಿ ಪರಿಸರ ವ್ಯವಸ್ಥೆಗೆ ಸೇವೆ ಒದಗಿಸುತ್ತವೆ. ಪೋಷಕಾಂಶಗಳ ಮರುಬಳಕೆ, ಮಣ್ಣು ಮತ್ತು ನೀರಿನ ಮಾಲಿನ್ಯ ತಡೆಗಟ್ಟಲು ಹಾಗೂ ರೋಗಗಳ ಹರಡುವಿಕೆಯನ್ನು ನಿಯಂತ್ರಿಸುವಲ್ಲಿ ರಣಹದ್ದುಗಳು ನಿರ್ಣಾಯಕ ಪಾತ್ರವಹಿಸುತ್ತವೆ. ಕರ್ನಾಟಕ, ತಮಿಳುನಾಡು, ಮತ್ತು ಕೇರಳದಂತಹ ರಾಜ್ಯಗಳಲ್ಲಿ ಏಳು ಹುಲಿ ಸಂರಕ್ಷಿತ ಪ್ರದೇಶಗಳು ಮತ್ತು ಅರಣ್ಯ ಪ್ರದೇಶಗಳಲ್ಲಿ ರಣಹದ್ದುಗಳ ಸಂಖ್ಯೆ ಫೆಬ್ರವರಿ ೨೦೨೩ ರಲ್ಲಿ ೨೪೬ ರಿಂದ ಡಿಸೆಂಬರ್‌ನಲ್ಲಿ ೩೦೮ಕ್ಕೆ ಗಮನಾರ್ಹವಾಗಿ ಏರಿಕೆ ಕಂಡಿದೆ. ಇದು ರಣಹದ್ದುಗಳನ್ನು ರಕ್ಷಿಸುವ ಪ್ರಯತ್ನವಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**